NAME OF THE NEWSPAPER:

# ಪ್ರಜ್ವಲ್ ಆಯ್ಕೆ ಅಸಿಂಧು ಕೋರಿದ್ದ ಅರ್ಜಿ ವಜಾ

ಬೆಂಗಳೂರು: 'ಹಾಸನ ಸಂಸದ ಪ್ರಜ್ವಲ್ ರೇವಣ್ಣ ಅವರ ಆಯ್ಕೆಯನ್ನು ಅಸಿಂಧುಗೊಳಿಸಬೇಕು' ಎಂದು ಕೋರಿ ಸಲ್ಲಿಸಲಾಗಿದ್ದ ಚುನಾವಣಾ ತಕರಾರು ಅರ್ಜಿಯನ್ನು ಹೈಕೋರ್ಟ್ ತಾಂತ್ರಿಕ ಕಾರಣಗಳಿಗೆ ವಜಾಗೊಳಿಸಿದೆ.

ಬಿಜೆಪಿಯ ಪರಾಜಿತ ಅಭ್ಯರ್ಥಿ ಎ. ಮಂಜು ಸಲ್ಲಿಸಿದ್ದ ಈ ಅರ್ಜಿಯ ಮೇಲಿನ ಆದೇಶವನ್ನು ನ್ಯಾಯಮೂರ್ತಿ ಜಾನ್ ಮೈಕೆಲ್ ಕುನ್ಹ ಅವರಿದ್ದ ಏಕಸದಸ್ಯ ನ್ಯಾಯಪೀಠ ಪ್ರಕಟಿಸಿದೆ.

'ಆರೋಪಗಳಿಗೆ ಸಂಬಂಧಿಸಿದಂತೆ ಅರ್ಜಿದಾರರು ಚುನಾವಣಾ ನಡವಳಿಕೆ ನಿಯಮ 94 'ಎ' ಕೆಳಗೆ ಪ್ರಮಾಣ ಪತ್ರ ಸಲ್ಲಿಸಬೇಕು. ಫಾರಂ ನಂ.25ರಲ್ಲಿ ಇದನ್ನು ಹಾಕಬೇಕಿತ್ತು. ಆದರೆ, ಆ ಪ್ರಮಾಣ ಪತ್ರ ಸಲ್ಲಿಸದೇ ಇರುವ ಕಾರಣ ಇದು ಪೂರ್ಣ ಪ್ರಮಾಣದ ಚುನಾವಣಾ ತಕರಾರು ಅರ್ಜಿ ಆಗುವುದಿಲ್ಲ. ಆದ್ದರಿಂದ ಜನಪ್ರತಿನಿಧಿ ಕಾಯ್ದೆ-1951ರ ಕಲಂ 86 1ರ ಅಡಿಯಲ್ಲಿ ಈ ಅರ್ಜಿ ವಜಾ ಮಾಡಲಾಗಿದೆ' ಎಂದು ಪೀಠ ಹೇಳಿದೆ.